ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

**ಪತ್ರಿಕಾ ತುಣುಕುಗಳು**

**PAPER CLIPPINGS**

24

ಇಲಾಖೆ / ವಿಷಯ : DEPARTMENT / SUBJECT: ಕೋವಿಡ್-19

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE 10/4/2021

# 10 ರಾಜ್ಯಗಳಲ್ಲಿ ಸೋಂಕು ತೀವ್ರ

**ಹೊಸದಿಲ್ಲಿ:** ಕರ್ನಾಟಕ ಸೇರಿದಂತೆ ದೇಶದ 10 ರಾಜ್ಯಗಳಲ್ಲಿ ಕೊರೊನಾ ಸೋಂಕಿತರ ಪ್ರಮಾಣ ತೀವ್ರ ಹೆಚ್ಚಳವಾಗುತ್ತಿದೆ , ಎಂದು ಕೇಂದ್ರ ಆರೋಗ್ಯ ಸಚಿವಾಲಯ ಆತಂಕ ವ್ಯಕ್ತಪಡಿಸಿದೆ. ಈ ರಾಜ್ಯಗಳಲ್ಲಿ ದೇಶದ ಒಟ್ಟಾರೆ ಸೋಂಕಿತರ ಪೈಕಿ ಶೇ.83.29ರಷ್ಟು ಮಂದಿ ಇದ್ದಾರೆ. ಕಳೆದ 24 ಗಂಟೆಗಳಲ್ಲಿ ದೇಶಾದ್ಯಂತ 1,31,968 ಹೊಸ ಸೋಂಕಿತರು ಪತ್ತೆಯಾಗಿದ್ದು, 780 ಸೋಂಕಿತರು ಮೃತಪಟ್ಟಿದ್ದಾರೆ. ಆ ಪೈಕಿ ಮಹಾರಾಷ್ಟ್ರದಲ್ಲಿ ಅತಿಹೆಚ್ಚು, ಅಂದರೆ 56,286, ಛತ್ತೀಸ್‌ಗಢದಲ್ಲಿ 10,652 ಮತ್ತು ಉತ್ತರಪ್ರದೇಶದಲ್ಲಿ 8,474 ಹೊಸ ಪ್ರಕರಣಗಳು ವರದಿಯಾಗಿವೆ. ಕಳೆದ ಒಂದು ವಾರದಿಂದ ದೇಶದ 149 ಜಿಲ್ಲೆಗಳಲ್ಲಿ ಕೊರೊನಾ ಸೋಂಕಿನ ಹೊಸ ಪ್ರಕರಣಗಳು ವರದಿಯಾಗಿಲ್ಲ ಎಂದು ಕೇಂದ್ರ ಆರೋಗ್ಯ ಸಚಿವ ಡಾ. ಹರ್ಷವರ್ಧನ್ ಹೇಳಿದ್ದಾರೆ. ರಾಜ್ಯಗಳ ಆರೋಗ್ಯ ಸಚಿವರೊಂದಿಗೆ ಸಭೆ ನಡೆಸಿದ ಬಳಿಕ ಮಾತನಾಡಿದ ಅವರು, ಎಂಟು ಜಿಲ್ಲೆಗಳಲ್ಲಿ ಎರಡು ವಾರಗಳಿಂದ ಸೋಂಕಿನ ಹೊಸ ಪ್ರಕರಣ ಪತ್ತೆಯಾಗಿಲ್ಲ ಎಂದು ಮಾಹಿತಿ ನೀಡಿದರು. "ದೇಶದಲ್ಲಿ ಈವರೆಗೆ 25,71,98,105 ಜನರನ್ನು ತಪಾಸಣೆಗೆ ಒಳಪಡಿಸಲಾಗಿದೆ. ಆ ಪೈಕಿ ಕಳೆದ 24 ಗಂಟೆ ಅವಧಿಯಲ್ಲಿಯೇ 13.64 ಲಕ್ಷ ತಪಾಸಣೆ ನಡೆಸಲಾಗಿದೆ. ಸೋಂಕು ನಿಯಂತ್ರಣಕ್ಕೆ ಕೇಂದ್ರ ಮತ್ತು ರಾಜ್ಯ ಸರಕಾರಗಳು ಸಂಘಟಿತ ಪ್ರಯತ್ನ ನಡೆಸುವುದು ಅಗತ್ಯವಾಗಿದೆ. ಕೇಂದ್ರ ಸರಕಾರ ರೂಪಿಸಿರುವ ಮಾರ್ಗದರ್ಶಿ ನಿಯಮಗಳನ್ನು ರಾಜ್ಯಗಳು ಕಟ್ಟುನಿಟ್ಟಾಗಿ ಪಾಲನೆ ಮಾಡಬೇಕಿದೆ," ಎಂದು ಹೇಳಿದರು.

11 ರಾಜ್ಯಗಳಲ್ಲಿ ಕೊರೊನಾ ಅಬ್ಬರದ ಭೀತಿ ಎದುರಾಗಿದೆ. ನಿತ್ಯ ಸರಾಸರಿ 5.37% ಹೆಚ್ಚುವರಿ ಕೊರೊನಾ ಪ್ರಕರಣಗಳು ವರದಿಯಾಗುತ್ತಿವೆ. ಆದರೆ ಸಾವಿನ ರಾಷ್ಟ್ರೀಯ ಸರಾಸರಿ ಇಳಿಕೆ ಕಂಡಿದೆ. ಎರಡನೇ ಅಲೆಯಲ್ಲಿ 15 ರಿಂದ 44 ವರ್ಷದವರಲ್ಲಿ ಹೆಚ್ಚಾಗಿ ಸೋಂಕು ಕಾಣಿಸುತ್ತಿದೆ.

- **ಸುಜಿತ್ ಕುಮಾರ್** ನಿರ್ದೇಶಕ, ಎನ್‌ಸಿಡಿಸಿ